# ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಾರವಾರ

## ಸಿ.ಸಿ. ನಂ. 1898/25

ಚಾ.ಸಾ. 10

ಪ್ರಾ.ಸಾ. 2

| | | |
|---|---|---|
| ಸಾಕ್ಷಿದಾರರ ಹೆಸರು | – | ಮಂಜೇಶ್ವರ ಚಂದಾವರ |
| ತಂದೆಯ ಹೆಸರು | – | ವಿಷ್ಣು ಚಂದಾವರ |
| ವಯಸ್ಸು | – | 59 ವರ್ಷ |
| ಉದ್ಯೋಗ | – | ಪಿ.ಎಸ್.ಐ. ಸೆನ್ ಪೊಲೀಸ್ ಠಾಣೆ, ಕಾರವಾರ |
| ವಾಸ್ತವ್ಯ | – | ಕಾರವಾರ |

(ಇಂದು ದಿನಾಂಕಃ 21-04-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ**

ನಾನು ಅಗಷ್ಟ 2023 ರಿಂದ ಇಲ್ಲಿಯವರೆಗೂ ಸೆನ್ ಪೊಲೀಸ್ ಠಾಣೆಯಲ್ಲಿ ನಾನು ಪಿ.ಎಸ್.ಐ. ಎಂದು ಕರ್ತವ್ಯನಿರ್ವಹಿಸುತ್ತಿದ್ದೇನೆ. ದಿನಾಂಕ 10-01-2025 ರಂದು ಸಾಯಂಕಾಲ 4.45 ಗಂಟೆ ಸಮಯದಲ್ಲಿ ನಾನು ಠಾಣೆಯ ಪ್ರಭಾರದಲ್ಲಿದ್ದಾಗ, ಚಾ.ಸಾ.1 ಹಾಜರಾಗಿ ಪ್ರಥಮ ವರ್ತಮಾನ ಹೇಳಿಕೆ, ಪಂಚನಾಮೆ, ನಕ್ಷೆ, ಅಮಾನತ್ತುಪಡಿಸಿಕೊಂಡು ಮುದ್ದೆಮಾಲುಗಳನ್ನು ನನ್ನ ಮುಂದೆ ಹಾಜರುಪಡಿಸಿರುತ್ತಾರೆ. ಅವುಗಳನ್ನು ಸ್ವೀಕರಿಸಿ ನಮ್ಮ ಠಾಣೆಯ ಗುನ್ನಾ ನಂ. 2/25 ರಲ್ಲಿ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿಕೊಂಡು ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಪ್ರಥಮ ವರ್ತಮಾನ ಹೇಳಿಕೆಯನ್ನು ಈಗಾಗಲೇ ನಿ.ಪಿ. 5 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.5(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿ.ಪಿ. 6 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.6(ಎ) ಎಂದು ಗುರುತಿಸಲಾಯಿತು. ಮಹಜರನ್ನು ಈಗಾಗಲೇ ನಿ.ಪಿ. 2 ಎಂದು ಗುರುತಿಸಲಾಗಿದೆ. ಕಚ್ಚಾ ನಕ್ಷೆಯನ್ನು ಈಗಾಗಲೇ ನಿ.ಪಿ.3 ಎಂದು ಗುರುತಿಸಲಾಗಿದೆ. ಮುದ್ದೆಮಾಲುಗಳನ್ನು ಮಾಲುಪಟ್ಟಿಗೆ ಅಳವಡಿಸಿಕೊಂಡಿರುತ್ತೇನೆ. ದಿನಾಂಕ 11-01-2025 ರಂದು ಚಾ.ಸಾ.2 ರಿಂದ ಚಾ.ಸಾ. 5 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿನಾಂಕ 13-01-2025 ರಂದು ವಶಪಡಿಸಿಕೊಂಡ ಮದ್ಯವನ್ನು ರಾಸಾಯನಿಕ ಪರೀಕ್ಷೆಗಾಗಿ ಧಾರವಾಡಕ್ಕೆ ಚಾ.ಸಾ. 8 ರವರ ಮೂಲಕ ಕಳುಹಿಸಿಕೊಟ್ಟಿರುತ್ತೇನೆ. ದಿನಾಂಕ 20-05-2025 ರಂದು ಚಾ.ಸಾ. 8, ಚಾ.ಸಾ. 9 ರವರಿಂದ ವರದಿ ಪಡೆದುಕೊಂಡು ಬಂದು ನನಗೆ ಕೊಟ್ಟಿದ್ದಾರೆ. ದಿನಾಂಕ 27-05-2025 ರಂದು ಇಲ್ಲಿಯವರೆಗಿನ ತನಿಖೆ ಪೂರ್ಣಗೊಂಡಿದ್ದರಿಂದ ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೆ. ಮದ್ಯದ ಬಾಟಲಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಮು.ಮಾ. 1

ಎಂದು ಗುರುತಿಸಲಾಗಿದೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ಈಗ ಗೈರು – ಹಾಜರಿದ್ದು ಆರೋಪಿ ಪರ ವಕೀಲರು ಆರೋಪಿಯ ಗೈರು–ಹಾಜರಾತಿ ವಿನಾಯತಿ ಕೋರಿ ಅರ್ಜಿ ಸಲ್ಲಿಸಿದ್ದು ಪುರಸ್ಕರಿಸಲಾಗಿದೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ವಿ.ಜಿ.ಎ. ವಕೀಲರಿಂದಃ**

ಆರೋಪಿತನಿಗೆ ಪಾರ್ಶವಾಯು ಆಗಿದೆ ಎಂದರೆ ಸರಿ. ಚಾ.ಸಾ.1 ನನ್ನ ಮೇಲಾಧಿಕಾರಿಯಾಗಿದ್ದರಿಂದ ಪ್ರಕರಣದ ಸತ್ಯಾಸತ್ಯತೆಯನ್ನು ಪರಿಶೀಲನೆ ಮಾಡದೇ ಅವರ ನಿರ್ದೇಶನದಂತೆ ಸುಳ್ಳು ಕೇಸನ್ನು ದಾಖಲಿಸಿದ್ದೇನೆ ಅನ್ನುವುದು ಸರಿಯಲ್ಲ. ಈ ಕೇಸಿನಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿಲ್ಲ ಅನ್ನುವುದು ಸರಿಯಲ್ಲ. ಯಾವುದೇ ದಾಖಲಾತಿಯನ್ನಾಗಲೀ, ಮುದ್ದೆಮಾಲುಗಳನ್ನಾಗಲೀ ವಶಪಡಿಸಿಕೊಂಡಿಲ್ಲ ಅನ್ನುವುದು ಸರಿಯಲ್ಲ. ಈ ಕೇಸಿಗೂ ಆರೋಪಿಗೂ ಯಾವುದೇ ಸಂಬಂಧ ಇಲ್ಲ ಅನ್ನುವುದು ಸರಿಯಲ್ಲ. ಚಾ.ಸಾ.1 ರವರ ಮಾತನ್ನು ಕೇಳಿ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅನ್ನುವುದು ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಮುಖ್ಯ ನ್ಯಾಯಿಕ ದಂ. ಕಾರವಾರ